**Akashvani: Bangalore**
**Regional Bulletin In Kannada**
**02.07.2026: 14.30hrs**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**02.07.2026: 14.30hrs**
*********

**ಮುಖ್ಯಾಂಶಗಳು :**

1. ಬೆಂಗಳೂರಿನ ಮಾದಪಟ್ಟಣದ ಕ್ವಾರಿಯಲ್ಲಿ ಬಂಡೆ ಕುಸಿದು ೬ ಕಾರ್ಮಿಕರು ಸಾವು; ನಿಯಮ ಉಲ್ಲಂಘಿಸುವ ಕ್ವಾರಿಗಳ ವಿರುದ್ಧ ಸೂಕ್ತ ಕ್ರಮ - ಸರ್ಕಾರ ಸ್ಪಷ್ಟನೆ
2. ಕ್ವಾರಿ ದುರಂತದಲ್ಲಿ ಮೃತಪಟ್ಟವರಿಗೆ ರಾಜ್ಯ ಸರ್ಕಾರ ಪರಿಹಾರ ನೀಡುವಂತೆ ಕೇಂದ್ರ ಸಸಚಿವ ಎಚ್.ಡಿ. ಕುಮಾರಸ್ವಾಮಿ ಆಗ್ರಹ
3. ವಿಧಾನಪರಿಷತ್ ನೂತನ ಸದಸ್ಯರಾಗಿ ಏಳು ಮಂದಿ ಪ್ರಮಾಣವಚನ
4. ವಚನ ಸಾಹಿತ್ಯವನ್ನು ಬೆಳಕಿಗೆ ತಂದಿದ್ದು ಫ.ಗು. ಹಳಕಟ್ಟಿ - ಸಚಿವ ಎಂ.ಬಿ. ಪಾಟೀಲ್
5. ರಾಜ್ಯದಲ್ಲಿ ಮುಂಗಾರು ವಿಳಂಬವಾಗಿದ್ದರೂ ಸರ್ಕಾರದ ನಿರ್ಲಕ್ಷ್ಯ - ಪ್ರತಿಪಕ್ಷ ನಾಯಕ ಆರ್. ಅಶೋಕ ಅಸಮಾಧಾನ

***********

ಬೆಂಗಳೂರು ದಕ್ಷಿಣ ತಾಲೂಕಿನ ಮಾದಪಟ್ಟಣದ ಬಳಿ ಕ್ರಷರ್ ಬಂಡೆ ಕುಸಿದು ೬ ಕಾರ್ಮಿಕರು ಸಾವನ್ನಪ್ಪಿದ್ದಾರೆ. ದುರಂತದಲ್ಲಿ ಹಲವರು ಗಾಯಗೊಂಡಿದ್ದಾರೆ. ಗಾಯಗೊಂಡವರನ್ನು ಬೆಂಗಳೂರಿನ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದು, ಕ್ವಾರಿಯ ಮಾಲೀಕರಿಗಾಗಿ ಶೋಧ ನಡೆಸುತ್ತಿದ್ದಾರೆ. ಮೃತಪಟ್ಟ ಕಾರ್ಮಿಕರು ಬಿಹಾರ, ಮಧ್ಯಪ್ರದೇಶ, ಉತ್ತರ ಕರ್ನಾಟಕಕ್ಕೆ ಸೇರಿದವರು ಎನ್ನಲಾಗಿದೆ. ಘಟನೆ ಕುರಿತಂತೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಸಾಮಾಜಿಕ ಮಾಧ್ಯಮದಲ್ಲಿ ಸಂತಾಪ ವ್ಯಕ್ತಪಡಿಸಿದ್ದಾರೆ. ನಿಯಮ ಉಲ್ಲಂಘಿಸುವ ಕ್ವಾರಿಗಳ ವಿರುದ್ಧ ಸರ್ಕಾರ ಸೂಕ್ತ ಕ್ರಮ ಕೈಗೊಳ್ಳಲಿದೆ ಎಂದು ಎಕ್ಸ್ ಮೂಲಕ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಭರವಸೆ ನೀಡಿದ್ದಾರೆ. ಕಲ್ಲು ಕ್ವಾರಿ ದುರಂತ ಪ್ರಕರಣಕ್ಕೆ ಸಂಬಂಧಿಸಿದಂತೆ ಗಣಿ ಮತ್ತು ಭೂ ವಿಜ್ಞಾನ ಇಲಾಖೆ, ಅರಣ್ಯ ಇಲಾಖೆ ಮತ್ತು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಅಧಿಕಾರಿಗಳ ವಿರುದ್ಧ ಎಫ್ಐಆರ್ ದಾಖಲಿಸಬೇಕು ಎಂದು ಯಶವಂತಪುರ ಶಾಸಕ ಎಸ್.ಟಿ. ಸೋಮಶೇಖರ್ ಆಗ್ರಹಿಸಿದ್ದಾರೆ. ಗಣಿ ಮತ್ತು ಭೂವಿಜ್ಞಾನ ಇಲಾಖೆ, ಅರಣ್ಯ ಇಲಾಖೆ, ಪೊಲೀಸ್ ಅಧಿಕಾರಿಗಳ ಶಾಮೀಲಿನಿಂದ ಈ ಪ್ರದೇಶದಲ್ಲಿ ಅಕ್ರಮ ಗಣಿಗಾರಿಕೆ ನಡೆಯುತ್ತಿದೆ ಎಂದು ಆರೋಪಿಸಿದ್ದಾರೆ.

***********

'ಕ್ವಾರಿ ಕುಸಿತದಲ್ಲಿ ೬ ಮಂದಿ ಮೃತಪಟ್ಟಿರುವ ಪ್ರಕರಣದ ಬಗ್ಗೆ ಅಧಿಕೃತ ಮಾಹಿತಿ ಪಡೆದ ಬಳಿಕ ಅಗತ್ಯ ಕ್ರಮಗಳ ಬಗ್ಗೆ ತೀರ್ಮಾನ ಮಾಡಲಾಗುವುದು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, "ಪೊಲೀಸ್ ಅಧಿಕಾರಿಗಳು, ಗಣಿ ಹಾಗೂ ಭೂ ವಿಜ್ಞಾನ ಇಲಾಖೆ ಅಧಿಕಾರಿಗಳು ದುರಂತ ಸ್ಥಳಕ್ಕೆ ಭೇಟಿ ನೀಡಿದ್ದಾರೆ. ಸ್ಫೋಟದಿಂದಾಗಿ ಇದು ಸಂಭವಿಸಿಲ್ಲ ಎಂಬ ಮಾಹಿತಿ ಬಂದಿದ್ದು, ಈ ಕ್ವಾರಿ ಕಾನೂನುಬದ್ಧವಾಗಿ ನಡೆಸಲಾಗುತ್ತಿದೆಯೇ ಇಲ್ಲವೇ ಎಂಬ ವರದಿಯನ್ನು ಪಡೆದು ಬಳಿಕ ಕ್ರಮ ಕೈಗೊಳ್ಳಲಾಗುವುದು ಎಂದು

ಸ್ಪಷ್ಟಪಡಿಸಿದ್ದಾರೆ.  ದುರಂತದಲ್ಲಿ ಸಾವನ್ನಪ್ಪಿದವರಿಗೆ ಪರಿಹಾರ ನೀಡಲಾಗುವುದು. ಜೊತೆಗೆ ಇಂತಹ ಘಟನೆಗಳು ಮತ್ತೆ ಮರುಕಳಿಸದಂತೆ ಎಚ್ಚರಿಕೆ ವಹಿಸುವುದು ಅತ್ಯಗತ್ಯ ಎಂದು ಹೇಳಿದ್ದಾರೆ.

****ಧ್ವನಿ**** ಡಿ.ಕೆ. ಶಿವಕುಮಾರ್

***********

ಕಲ್ಲು ಕ್ವಾರಿ ದುರಂತದಲ್ಲಿ ಮೃತಪಟ್ಟವರ ಕುಟುಂಬಕ್ಕೆ ರಾಜ್ಯ ಸರ್ಕಾರ ಪರಿಹಾರ ನೀಡಬೇಕು ಎಂದು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಆಗ್ರಹಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪ್ರತಿಕ್ರಿಯೆ ನೀಡಿರುವ ಅವರು, ಈ ಘಟನೆ ಅತೀವ ನೋವುಂಟು ಮಾಡಿದೆ ಎಂದು ಹೇಳಿದ್ದಾರೆ. ರಾಜ್ಯ ಸರ್ಕಾರ ನೊಂದ ಕುಟುಂಬಗಳಿಗೆ ತಕ್ಷಣವೇ ಸೂಕ್ತ ಪರಿಹಾರ ನೀಡುವುದರ ಜೊತೆಗೆ ಇನ್ನಿತರ ತುರ್ತು ನೆರವು ಒದಗಿಸಬೇಕು ಎಂದು ಒತ್ತಾಯಿಸಿದ್ದಾರೆ.

***********

ಬೆಂಗಳೂರಿನಲ್ಲಿ ಸಂಭವಿಸಿದ ಕಲ್ಲು ಕ್ವಾರಿ ದುರಂತ ಪ್ರಕರಣದಲ್ಲಿ ಏಳು ಕಾರ್ಮಿಕರು ಸಾವನ್ನಪ್ಪಿರುವ ಕುರಿತಂತೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ದುಃಖ ವ್ಯಕ್ತಪಡಿಸಿದ್ದಾರೆ. ಸಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ರಾಜ್ಯ ಸರ್ಕಾರ ತಕ್ಷಣವೇ ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದ್ದಾರೆ. ಈ ಘಟನೆ ಕುರಿತಂತೆ ಉನ್ನತ ಮಟ್ಟದ ತನಿಖೆ ನಡೆಸುವಂತೆ ಒತ್ತಾಯಿಸಿದ್ದಾರೆ. ಮೃತರ ಕುಟುಂಬಗಳಿಗೆ ಪರಿಹಾರ ಘೋಷಿಸಬೇಕು ಎಂದು ತಿಳಿಸಿದ್ದಾರೆ. ಈ ನಡುವೆ, ಪ್ರತಿಪಕ್ಷ ನಾಯಕ ಆರ್. ಅಶೋಕ, ಖಾಸಗಿ ಆಸ್ಪತ್ರೆಗೆ ತೆರಳಿ, ಗಾಯಾಳುಗಳ ಆರೋಗ್ಯ ವಿಚಾರಿಸಿದ್ದಾರೆ.

***********

ವಿಧಾನಪರಿಷತ್ ನೂತನ ಸದಸ್ಯರಾಗಿ ಕಾಂಗ್ರೆಸ್ ಪಕ್ಷದ ಬಿ.ಕೆ. ಹರಿಪ್ರಸಾದ್, ಪಿ.ವಿ. ಮೋಹನ್, ಶಿವಣ್ಣ ಮಳವಳ್ಳಿ, ತಿಪ್ಪಣ್ಣಪ್ಪ ಕಮಕನೂರು, ವಿನಯ್ ಕಾರ್ತಿಕ್, ಬಿಜೆಪಿಯ ಕೌಟಿಲ್ಯ ರಘು ಹಾಗೂ ಲಿಂಗರಾಜ್ ಪಾಟೀಲ್ ಇಂದು ಪ್ರಮಾಣವಚನ ಸ್ವೀಕರಿಸಿದರು. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್, ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ವಿಧಾನಸಭೆ ಉಪಾಧ್ಯಕ್ಷರಾದ ರುದ್ರಪ್ಪ ಲಮಾಣಿ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

***********

ವಚನ ಸಾಹಿತ್ಯವನ್ನು ಬೆಳಕಿಗೆ ತಂದಿದ್ದೇ ಫ.ಗು. ಹಳಕಟ್ಟಿ ಎಂದು ಸಚಿವ ಎಂ.ಬಿ. ಪಾಟೀಲ್ ಸ್ಮರಿಸಿದ್ದಾರೆ. ಕರ್ನಾಟಕ ರಾಜ್ಯ ಮುದ್ರಣಕಾರರ ಸಂಘ ಮತ್ತು ವಿಜಯಪುರದ ಫ.ಗು. ಹಳಕಟ್ಟಿ ಸಂಶೋಧನಾ ಕೇಂದ್ರದ ಜೊತೆಗೂಡಿ ಬೆಂಗಳೂರಿನ ತಮ್ಮ ನಿವಾಸದಲ್ಲಿ ಏರ್ಪಡಿಸಿದ್ದ ಹಳಕಟ್ಟಿ ಜನ್ಮದಿನ ಮತ್ತು ವಚನ ಸಂರಕ್ಷಣಾ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಫ.ಗು. ಹಳಕಟ್ಟಿ ಇಲ್ಲದೇ ಹೋಗಿದ್ದರೆ ಶರಣ ಸಂಸ್ಕೃತಿ, ಲಿಂಗಾಯತ ಧರ್ಮ, ಬಸವಾದಿ ಶರಣರು ಎಲ್ಲವೂ ಕಳೆದು ಹೋಗುತ್ತಿತ್ತು ಎಂದು ತಿಳಿಸಿದ್ದಾರೆ. ಹಿರಿಯ ಸಾಹಿತಿ ಗೊ.ರು.ಚನ್ನಬಸಪ್ಪ ಮಾತನಾಡಿ, ಹಳಕಟ್ಟಿ ಅವರಿಂದಾಗಿ ವಿಶ್ವಗುರು ಬಸವಣ್ಣ ಮುಂತಾದವರು ಬೆಳಕಿಗೆ ಬಂದರು. ವಚನ ಸಂಸ್ಕೃತಿ ಇಂದು ಹೆಮ್ಮರವಾಗಿ ಬೆಳೆಯಲು ಅವರೇ ಮೂಲಕಾರಣ ಎಂದು ತಿಳಿಸಿದ್ದಾರೆ.

***********

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದಲ್ಲಿಂದು ಸಚಿವ ಸಂಪುಟ ಸಭೆ ನಡೆಯುತ್ತಿದೆ. ಸಭೆಯಲ್ಲಿ ಪ್ರಮುಖವಾಗಿ ಮನ್ರೇಗಾದ ಹೊಸ ರೂಪವಾದ ವಿಕಸಿತ ಭಾರತ - ಜಿ ರಾಮ್ ಜಿ ಯೋಜನೆಯಡಿ ರಾಜ್ಯದ ಮೇಲೆ ಬಿದ್ದಿರುವ ಆರ್ಥಿಕ

ಹೊರೆಯನ್ನು ಭರಿಸುವ ಸಂಬಂಧ ಚರ್ಚೆ ನಡೆಯಲಿದೆ. ಕೇಂದ್ರದ ನೂತನ ನೀತಿಯಿಂದಾಗಿ ರಾಜ್ಯ ಸರ್ಕಾರ ಹೆಚ್ಚಿನ ಹಣ ಬಿಡುಗಡೆ ಮಾಡಬೇಕಾಗಿದ್ದು, ಸಂಪುಟ ಸಭೆಯಲ್ಲಿ ಇದಕ್ಕೆ ಅನುಮತಿ ಕೋರಲಾಗುವುದು ಎಂದು ಗ್ರಾಮೀಣಾಭಿವೃದ್ಧಿ ಸಚಿವ ಈಶ್ವರ್ ಖಂಡ್ರೆ ತಿಳಿಸಿದ್ದಾರೆ.

***********

ರಾಜ್ಯದಲ್ಲಿ ಮುಂಗಾರು ವಿಳಂಬವಾಗಿದ್ದು, ರೈತರು, ಕೃಷಿ ಕಾರ್ಮಿಕರು ಬರಗಾಲದ ಆತಂಕದಲ್ಲಿದ್ದರೂ ರಾಜ್ಯ ಸರ್ಕಾರ ನಿರ್ಲಕ್ಷ್ಯ ವಹಿಸುತ್ತಿದೆ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ ಆರೋಪಿಸಿದ್ದಾರೆ. ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ರಾಜ್ಯದ ೧೫೦ಕ್ಕೂ ಹೆಚ್ಚು ತಾಲೂಕುಗಳಲ್ಲಿ ಬರದ ಛಾಯೆ ಆವರಿಸಿದೆ. ಬೆಳಗಾವಿ, ಬಾಗಲಕೋಟೆ ಸೇರಿದಂತೆ ಹಲವು ಜಿಲ್ಲೆಗಳಲ್ಲಿ ಜಲಾಶಯಗಳು ಬರಿದಾಗುತ್ತಿದ್ದು, ಕುಡಿಯುವ ನೀರಿನ ಬಿಕ್ಕಟ್ಟು ಆರಂಭವಾಗಿದೆ. ಬರ ಘೋಷಣೆಗೆ ಅಗತ್ಯವಿರುವ ಎಲ್ಲ ಸೂಚ್ಯಂಕಗಳು ಸ್ಪಷ್ಟವಾಗಿದ್ದರೂ ಸರ್ಕಾರ ಇನ್ನೂ ನಿರ್ಧಾರ ಕೈಗೊಂಡಿಲ್ಲ ಎಂದು ದೂರಿದ್ದಾರೆ.

***********

ಭದ್ರಾ ಅಚ್ಚುಕಟ್ಟು ವ್ಯಾಪ್ತಿಯಲ್ಲಿ ಮುಂಗಾರು ಮಳೆಯ ತೀವ್ರ ಕೊರತೆಯಿಂದಾಗಿ ಜಲಾಶಯದಲ್ಲಿ ನೀರಿನ ಸಂಗ್ರಹ ಗಣನೀಯವಾಗಿ ಕುಸಿದಿದೆ. ಲಭ್ಯವಿರುವ ನೀರನ್ನು ಕೇವಲ ಕುಡಿಯುವ ಉದ್ದೇಶಕ್ಕೆ ಮಾತ್ರ ಬಳಸಲು ಸರ್ಕಾರ ಆದೇಶ ಹೊರಡಿಸಿದೆ ಎಂದು ನೀರಾವರಿ ಇಲಾಖೆ ಅಧೀಕ್ಷಕ ಅಭಿಯಂತರ ದಾವಣಗೆರೆಯಲ್ಲಿ ತಿಳಿಸಿದ್ದಾರೆ. ಜಲಾಶಯದಲ್ಲಿ ಸದ್ಯಕ್ಕೆ ಕನಿಷ್ಠ ಪ್ರಮಾಣದ ನೀರು ಮಾತ್ರ ಲಭ್ಯವಿದ್ದು, ಮುಂಗಾರು ಹಂಗಾಮಿನ ಬೆಳೆಗಳಿಗೆ ಬಲದಂಡೆ ಹಾಗೂ ಎಡದಂಡೆ ನಾಲೆಗಳ ಮೂಲಕ ನೀರು ಹರಿಸಲು ಸಾಧ್ಯವಾಗುತ್ತಿಲ್ಲ ಎಂದು ಪ್ರಕಟಣೆಯಲ್ಲಿ ಹೇಳಿದ್ದಾರೆ.

***********

ಕರಾವಳಿ ಜಿಲ್ಲೆಗಳಲ್ಲಿ ಧಾರಾಕಾರವಾಗಿ ಮಳೆ ಸುರಿಯುತ್ತಿದೆ. ಮುನ್ನೆಚ್ಚರಿಕಾ ಕ್ರಮವಾಗಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ರೆಡ್ ಅಲರ್ಟ್ ಘೋಷಿಸಲಾಗಿದ್ದು, ಇಂದು ಶಾಲಾ - ಕಾಲೇಜುಗಳಿಗೆ ರಜೆ ಘೋಷಿಸಲಾಗಿದೆ. ತಗ್ಗು ಪ್ರದೇಶ, ಕೆರೆ, ನದಿ ತೀರ, ಸಮುದ ತೀರಕ್ಕೆ ಮಕ್ಕಳು ತೆರಳದಂತೆ ನೋಡಿಕೊಳ್ಳಬೇಕು ಹಾಗೂ ಮೀನುಗಾರರು ಕೂಡ ಸಮುದ್ರಕ್ಕೆ ಇಳಿಯದೆ ಮುನ್ನೆಚ್ಚರಿಕೆ ವಹಿಸುವಂತೆ ಜಿಲ್ಲಾಧಿಕಾರಿ ದರ್ಶನ್ ಎಚ್ ವಿ ಸೂಚನೆ ನೀಡಿದ್ದಾರೆ. ಜಿಲ್ಲಾ ಮಟ್ಟದ ಮತ್ತು ತಾಲೂಕು ಮಟ್ಟದ ಅಧಿಕಾರಿಗಳು ಕಡ್ಡಾಯಾವಾಗಿ ಕೇಂದ್ರ ಸ್ಥಾನದಲ್ಲಿರಬೇಕು. ವಿಪತ್ತು ನಿರ್ವಹಣೆಯನ್ನು ಚಾಚೂ ತಪ್ಪದೆ ಪಾಲಿಸಬೇಕು ಎಂದು ಅಧಿಕಾರಿಗಳಿಗೆ ಸ್ಪಷ್ಟ ಸೂಚನೆ ನೀಡಿದ್ದಾರೆ. ಇನ್ನೊಂದೆಡೆ ಉತ್ತರ ಕನ್ನಡ ಜಿಲ್ಲೆಯ ಕಾರವಾರ ತಾಲೂಕಿನ ಎಲ್ಲಾ ಅಂಗನವಾಡಿ, ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಿಗೆ ಕಾರವಾರ ಕ್ಷೇತ್ರ ಶಿಕ್ಷಣಾಧಿಕಾರಿ ರಜೆ ಘೋಷಿಸಿದ್ದಾರೆ. ಸಾರ್ವಜನಿಕರು ಹಾಗೂ ಪ್ರವಾಸಿಗರು ನದಿ, ಹೊಳೆ, ಕೆರೆ ಮತ್ತು ಸಮುದ್ರ ತೀರಗಳಿಗೆ ತೆರಳದಂತೆ ಜಿಲ್ಲಾಡಳಿತ ಕಟ್ಟುನಿಟ್ಟಿನ ಸೂಚನೆ ನೀಡಿದೆ. ತಗ್ಗು ಪ್ರದೇಶಗಳು ಹಾಗೂ ಜಲಮೂಲಗಳ ಬಳಿ ಮಕ್ಕಳು ತೆರಳದಂತೆ ಪಾಲಕರು ಎಚ್ಚರಿಕೆ ವಹಿಸಬೇಕು ಎಂದು ಜಿಲ್ಲಾಡಳಿತ ಮನವಿ ಮಾಡಿದೆ. ಹವಾಮಾನ ವೈಪರೀತ್ಯದ ಹಿನ್ನೆಲೆಯಲ್ಲಿ ಮೀನುಗಾರರು ಸಮುದ್ರಕ್ಕೆ ಇಳಿಯಬಾರದು ಎಂದು ಸೂಚಿಸಲಾಗಿದೆ. ಪ್ರಾಕೃತಿಕ ವಿಕೋಪಕ್ಕೆ ಸಂಬಂಧಿಸಿದ ಯಾವುದೇ ತುರ್ತು ಪರಿಸ್ಥಿತಿ ಎದುರಾದಲ್ಲಿ ಜಿಲ್ಲಾಧಿಕಾರಿ ಕಚೇರಿಯ ನಿಯಂತ್ರಣ ಕೊಠಡಿಯನ್ನು ಸಂಪರ್ಕಿಸುವಂತೆ ಉತ್ತರ ಕನ್ನಡ ಜಿಲ್ಲಾಡಳಿತ ಪ್ರಕಟಣೆಯಲ್ಲಿ ತಿಳಿಸಿದೆ.

***********

ಕೆಎಸ್‌ಸಿಎ ಆಯೋಜಿಸುತ್ತಿರುವ ಮಹಾರಾಜ ಟ್ರೋಫಿ ಟಿ-೨೦ ಕ್ರಿಕೆಟ್ ಪಂದ್ಯಾವಳಿಯಲ್ಲಿಂದು ಹುಬ್ಬಳ್ಳಿ ಟೈಗರ್ಸ್ ಮೈಸೂರು ವಾರಿಯರ್ಸ್ ತಂಡವನ್ನು ಎದುರಿಸಲಿದೆ. ಟಾಸ್ ಗೆದ್ದ ಮೈಸೂರು ವಾರಿಯರ್ಸ್ ಬೌಲಿಂಗ್ ಆಯ್ದುಕೊಂಡಿದೆ. ಸಂಜೆ ೭ ಗಂಟೆಗೆ ನಡೆಯುವ ಇನ್ನೊಂದು ಪಂದ್ಯದಲ್ಲಿ ಮಂಗಳೂರು ಡ್ರ್ಯಾಗನ್ಸ್ ಹಾಗೂ ಶಿವಮೊಗ್ಗ ಲಯನ್ಸ್ ತಂಡಗಳು ಮುಖಾಮುಖಿಯಾಗಲಿವೆ.

***********

೧. ಕಾಡು ಔಡಲ ಬೀಜ ಸೇವಿಸಿ ೨೫ಕ್ಕೂ ಹೆಚ್ಚು ಮಕ್ಕಳು ಅಸ್ವಸ್ಥಗೊಂಡ ಘಟನೆ ಗದಗ ತಾಲೂಕಿನ ಬೆಳಧಡಿ ತಾಂಡದಲ್ಲಿ ನಿನ್ನೆ ಸಂಜೆ ಸಂಭವಿಸಿದ್ದು, ಮಕ್ಕಳು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಸ್ಥಳಕ್ಕೆ ಗದಗ ಡಿಡಿಪಿಐ ಆರ್.ಎಸ್ ಬುರಡಿ ಭೇಟಿ ನೀಡಿ, ಪರಿಶೀಲನೆ ನಡೆಸಿದ್ದಾರೆ.

೨. ಸಾಮಾಜಿಕ ಜಾಲತಾಣದಲ್ಲಿ ಹರಡುವ ಸುಳ್ಳು ಸುದ್ದಿಗಳನ್ನು ತಡೆಯಲು ಪತ್ರಕರ್ತರು ಮುಂದಾಗಬೇಕು ಎಂದು ಕೋಲಾರ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಪ್ರವೀಣ್ ಪಿ.ಬಾಗೇವಾಡಿ ತಿಳಿಸಿದ್ದಾರೆ.

******END*****